ಕಂದಾಯ ಇಲಾಖೆ

# ಅಧ್ಯಕ್ಷರು, ಗ್ರಾಮಲೆಕ್ಕಿಗರ ನೇಮಕಾತಿ ಪ್ರಾಧಿಕಾರ ಹಾಗೂ ಜಿಲ್ಲಾಧಿಕಾರಿಯವರ ಕಾರ್ಯಾಲಯ, ಹಾಸನ ಜಿಲ್ಲೆ, ಹಾಸನ.

ಸಂಖ್ಯೆ: ಗ್ರಾ.ಲೆ.ಸಿಬ್ಬಂದಿ–180/2019–2020 ದಿನಾಂಕ: 27–02–2020.

## ಅಧಿಸೂಚನೆ

ಕರ್ನಾಟಕ ಸರ್ಕಾರದ ಕಂದಾಯ ಇಲಾಖೆಯ ಹಾಸನ ಜಿಲ್ಲಾ ಘಟಕದಲ್ಲಿ ಬರುವ ತಾಲ್ಲೂಕುಗಳಲ್ಲಿ 2019 ನೇ ಸಾಲಿನ ನೇಮಕಾತಿ ಪ್ರಕ್ರಿಯೆಯ ನಂತರ ವಯೋನಿವೃತ್ತಿ, ರಾಜೀನಾಮೆ, ಮುಂಬಡ್ತಿ, ವರ್ಗಾವಣೆ ಇನ್ನಿತರ ಕಾರಣಗಳಿಂದ ತೆರವಾಗಿರುವ ಗ್ರಾಮಲೆಕ್ಕಿಗರ ಹುದ್ದೆಗಳನ್ನು, ಕರ್ನಾಟಕ ಸಾಮಾನ್ಯ ಸೇವೆಗಳು (ರೆವಿನ್ಯೂ ಸಬೊರ್ಡಿನೇಟ್ ಬ್ರಾಂಚ್) (ಕೇಡರ್ ಅಂಡ್ ರೆಕ್ರ್ಯೂಟ್‌ಮೆಂಟ್) (ತಿದ್ದುಪಡಿ) ನಿಯಮಗಳು 2008 ಮತ್ತು 2009 ರನ್ವಯ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಸರ್ಕಾರದ ಆದೇಶಗಳಲ್ಲಿ ಅನುಮೋದನೆ ನೀಡಿರುತ್ತಾರೆ. ಅದರಂತೆ ಗ್ರಾಮಲೆಕ್ಕಿಗರ ಖಾಲಿ ಹುದ್ದೆಗಳನ್ನು ನೇರನೇಮಕಾತಿಯಿಂದ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ನಿಗದಿಪಡಿಸಿದ ನಮೂನೆಯಲ್ಲಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

**ಖಾಲಿ ಇರುವ ಹುದ್ದೆಗಳ ವಿವರಗಳು ಈ ಕೆಳಗಿನಂತಿವೆ :**

1. **ಹುದ್ದೆ ಹಾಗೂ ಸಂಖ್ಯೆ :** ಗ್ರಾಮಲೆಕ್ಕಿಗರು, ಒಟ್ಟು ಹುದ್ದೆಗಳು : 34
2. **ಹುದ್ದೆಗಳ ವರ್ಗೀಕರಣ :**

34 ಹುದ್ದೆಗಳ ವಿವರ – ನೇರನೇಮಕಾತಿ ರೋಸ್ಟರ್ ಕ್ರಮಾಂಕ: 55 ರಿಂದ 88 ರವರೆಗೆ.

| ಕ್ರ.ಸಂ. | ವರ್ಗೀಕರಣದ ವಿವರ | ಮಾಜಿ ಸೈನಿಕರು | ಅಂಗವಿಕಲ ಅಭ್ಯರ್ಥಿ | ಸಾಮಾನ್ಯ ಅಭ್ಯರ್ಥಿ | ಯೋಜನಾ ನಿರಾಶ್ರಿತರು | ಕನ್ನಡ ಮಾಧ್ಯಮ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಮಹಿಳಾ ಅಭ್ಯರ್ಥಿ | ಒಟ್ಟು | ಸಮತಲ ಮೀಸಲಾತಿ ಪ್ರಾರಂಭಿಸುವ ಬಿಂದುವಿನ ಕ್ರಮಸಂಖ್ಯೆ |
|---|---|---|---|---|---|---|---|---|---|---|
| 1 | ಸಾಮಾನ್ಯ | 2 | 1 (ಶ್ರವಣದೋಷ) | 3 | 1 | 1 | 4 | 5 | 17 | 8–ಮಹಿಳಾ ಅಭ್ಯರ್ಥಿ |
| 2 | ಪರಿಶಿಷ್ಠ ಜಾತಿ | 1 | 0 | 1 | 0 | 0 | 1 | 1 | 4 | 10–ಮಾಜಿ ಸೈನಿಕ ಅಭ್ಯರ್ಥಿ |
| 3 | ಪರಿಶಿಷ್ಠ ಪಂಗಡ | 0 | 0 | 0 | 0 | 0 | 0 | 1 | 1 | 15–ಮಹಿಳಾ ಅಭ್ಯರ್ಥಿ |
| 4 | ಪ್ರವರ್ಗ–I | 1 | 0 | 1 | 0 | 0 | 0 | 0 | 2 | 1–ಇತರೆ |
| 5 | ಪ್ರವರ್ಗ–IIA | 1 | 0 | 1 | 0 | 0 | 2 | 1 | 5 | 9–ಗ್ರಾಮೀಣ ಅಭ್ಯರ್ಥಿ |
| 6 | ಪ್ರವರ್ಗ–IIB | 1 | 0 | 1 | 0 | 0 | 0 | 0 | 2 | 19–ಇತರೆ |
| 7 | ಪ್ರವರ್ಗ–IIIA | 0 | 0 | 1 | 0 | 0 | 0 | 0 | 1 | 19–ಇತರೆ |
| 8 | ಪ್ರವರ್ಗ–IIIB | 0 | 1 (ಚಲನ ವಲನ ವೈಕಲ್ಯತೆ) | 0 | 0 | 0 | 1 | 0 | 2 | 3–ಗ್ರಾಮೀಣ ಅಭ್ಯರ್ಥಿ |
| | **ಒಟ್ಟು** | **6** | **2** | **8** | **1** | **1** | **8** | **8** | **34** | |

3. **ವೇತನ ಶ್ರೇಣಿ :**

21400–500–22400–550–24600–600–27000–650–29600–750–32600–850–36000–950–39800–1100–42000

4. **ಶೈಕ್ಷಣಿಕ ವಿದ್ಯಾರ್ಹತೆ :**

ಪದವಿ ಪೂರ್ವ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ ಇವರು ನಡೆಸುವ ದ್ವಿತೀಯ ಪಿ.ಯು.ಸಿ. ಪರೀಕ್ಷೆಯಲ್ಲಿ ಅಥವಾ CBSE(Central Board of Secondary Education, New Delhi) ಅಥವಾ ICSE (Indian Certificate of Secondary Education, New Delhi) ನಡೆಸುವ 12 ನೇ ತರಗತಿ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿರಬೇಕು.

ಜೆ.ಓ.ಸಿ./ಐ.ಟಿ.ಐ. ಹಾಗೂ ಇತರೆ ತತ್ಸಮಾನ ಪರೀಕ್ಷೆಗಳು ಹಾಗೂ ಮುಕ್ತ ವಿಶ್ವವಿದ್ಯಾಲಯಗಳಿಂದ ಪಡೆದಿರುವ ವಿದ್ಯಾರ್ಹತೆಯ ಅಂಕಪಟ್ಟಿಗಳನ್ನು ಅಂಗೀಕರಿಸಲಾಗುವುದಿಲ್ಲ ಎಂಬುದಾಗಿ ಸ್ಪಷ್ಟಪಡಿಸಿದೆ. ಅಂತಹ ಅರ್ಜಿಗಳನ್ನು ಸಲ್ಲಿಸಿದಲ್ಲಿ ಯಾವುದೇ ಮುನ್ಸೂಚನೆಯನ್ನು ನೀಡದೆ ತಿರಸ್ಕರಿಸಲಾಗುವುದು.

5. **ಅರ್ಜಿ ಸಲ್ಲಿಸುವ ವಿಧಾನ ಹಾಗೂ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ:**

ಅಂತರ್ಜಾಲದ ಮೂಲಕ (Online) ಅರ್ಜಿಗಳನ್ನು ದಿನಾಂಕ: 02–03–2020 ರಿಂದ ಸಲ್ಲಿಸಬಹುದಾಗಿದ್ದು, ಕೊನೆಯ ದಿನಾಂಕ: 31–03–2020 ಆಗಿರುತ್ತದೆ. ಬ್ಯಾಂಕಿನಲ್ಲಿ ನಿಗದಿತ ಅರ್ಜಿ ಶುಲ್ಕ ಪಾವತಿಸಿ ಚಲನ್‌ನ್ನು ಅಪ್‌ಲೋಡ್ ಮಾಡಲು ಕೊನೆಯ ದಿನಾಂಕ: 01–04–2020 ಆಗಿರುತ್ತದೆ. ನಿಗದಿತ ದಿನಾಂಕದ (31–03–2020) ನಂತರ ಸಲ್ಲಿಸಿದ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ.

ಅರ್ಜಿಗಳನ್ನು ಆನ್‌ಲೈನ್ (Online) ಮುಖಾಂತರ ಮಾತ್ರ ಸಲ್ಲಿಸತಕ್ಕದ್ದಾಗಿದೆ. ಅರ್ಜಿಗಳನ್ನು ಖುದ್ದಾಗಿ ಅಥವಾ ಅಂಚೆ ಮೂಲಕ ಪ್ರತ್ಯೇಕವಾಗಿ ಸಲ್ಲಿಸಲು ಅವಕಾಶವಿರುವುದಿಲ್ಲ. ಅಭ್ಯರ್ಥಿಯು ಇಲಾಖೆಯ ಅಧಿಕೃತ ವೆಬ್‌ಸೈಟ್ http://hassan.nic.in/ or http://hassan-va.kar.nic.in/ ತೆರೆದು ಕಂಪ್ಯೂಟರ್ ಪರದೆಯ ಮೇಲೆ ಅರ್ಜಿಯನ್ನು ತುಂಬಬೇಕು. ಅಭ್ಯರ್ಥಿಯು Submit Button ಅನ್ನು ಒತ್ತಿದರೆ ಅರ್ಜಿ ಸಂಖ್ಯೆ (Reference Number) ಸೃಷ್ಟಿಯಾಗುತ್ತದೆ. ಆನ್‌ಲೈನ್ ಅರ್ಜಿಯನ್ನು ಭರ್ತಿ ಮಾಡಿದ ನಂತರ ಅಭ್ಯರ್ಥಿಗಳು ಸ್ವೀಕೃತಿ ಪತ್ರ (Acknowledgement slip) ಮತ್ತು ದ್ವಿಪ್ರತಿ ಚಲನ್ ಅನ್ನು ತೆಗೆದುಕೊಳ್ಳತಕ್ಕದ್ದು, ಕಂಪ್ಯೂಟರ್‌ನಲ್ಲಿ ಮುದ್ರಿಸಿದ ಚಲನ್‌ನಂತೆ ಅರ್ಜಿ ಶುಲ್ಕವನ್ನು ಕಾರ್ಪೋರೇಷನ್ ಬ್ಯಾಂಕ್‌ನ ಯಾವುದಾದರೂ ಶಾಖೆಯಲ್ಲಿ CORPORATION BANK, HASSAN BRANCH A/C No- 520101225061550, IFSC Code- CORP0000020 ಗೆ ಪಾವತಿಸಬೇಕು. **ಪಾವತಿ ಮಾಡಿದ ಚಲನ್‌ನ ಕೌಂಟರ್ ಫೈಲನ್ನು ಸ್ಕ್ಯಾನ್ ಮಾಡಿ ಇದೇ ವೆಬ್ ಸೈಟಿನಲ್ಲಿ ಚಲನ್ ಸಂಖ್ಯೆ, ದಿನಾಂಕಗಳೊಂದಿಗೆ ಅಪ್‌ಲೋಡ್ ಮಾಡುವುದು. ಅಭ್ಯರ್ಥಿಗಳು ಸ್ವೀಕೃತಿ ಸ್ಲಿಪನ್ನು ಮತ್ತು ಚಲನ್ ಪಾವತಿಯ ಒಂದು ಪ್ರತಿಯನ್ನು ಕಡ್ಡಾಯವಾಗಿ ತಮ್ಮ ಬಳಿ ಇರಿಸಿಕೊಳ್ಳತಕ್ಕದ್ದು. ಇನ್ನೊಂದು ಚಲನ್ ಪ್ರತಿ ಬ್ಯಾಂಕ್ ಬಳಿ ಇರುತ್ತದೆ**. ಈ ದಾಖಲೆಗಳನ್ನು ನಿಗದಿಪಡಿಸಿದ ದಿನಾಂಕದಂದು ಹಾಜರುಪಡಿಸತಕ್ಕದ್ದು.

6. **ನಿಗದಿತ ಅರ್ಜಿ ಶುಲ್ಕ :**

| | |
|---|---|
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1 ಹಾಗೂ ಅಂಗವಿಕಲ ಅಭ್ಯರ್ಥಿಗಳು | ರೂ. 25–00 |
| 2ಎ, 2ಬಿ, 3ಎ, 3ಬಿ ವರ್ಗ, ಮಹಿಳಾ ಹಾಗೂ ಮಾಜಿ ಸೈನಿಕ ಅಭ್ಯರ್ಥಿಗಳು | ರೂ. 150–00 |
| ಸಾಮಾನ್ಯ ವರ್ಗ | ರೂ. 300–00 |

7. **ವಯೋಮಿತಿ :**

ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕ: **31–03–2020** ರಂದು ಈ ಕೆಳಗಿನಂತೆ ವಯೋಮಿತಿ ಹೊಂದಿರತಕ್ಕದ್ದು.

ಎ)

| ವರ್ಗೀಕರಣದ ವಿವರ | ಕನಿಷ್ಠ | ಗರಿಷ್ಠ |
|---|---|---|
| ಪ.ಜಾ./ಪ.ಪಂ./ಪ್ರ–1 | 18 | 40 |
| 2ಎ, 2ಬಿ, 3ಎ, 3ಬಿ. | 18 | 38 |
| ಸಾಮಾನ್ಯ ವರ್ಗ | 18 | 35 |

ಎಸ್.ಎಸ್.ಎಲ್.ಸಿ ಅಥವಾ ವರ್ಗಾವಣೆ ಪ್ರಮಾಣ ಪತ್ರ ಅಥವಾ ಕ್ಯೂಮಿಲೇಟಿವ್ ರೆಕಾರ್ಡ್‌ನಲ್ಲಿ ನಮೂದಿಸಿರುವ ಜನ್ಮ ದಿನಾಂಕವನ್ನು ಆಯ್ಕೆ ಪ್ರಾಧಿಕಾರವು ಪರಿಗಣಿಸುವುದು. ಇತರೆ ಯಾವುದೇ ದಾಖಲೆಗಳನ್ನು ಪರಿಗಣಿಸಲಾಗುವುದಿಲ್ಲ.

ಬಿ) ಸರ್ಕಾರ ಅಥವಾ ಸ್ಥಳೀಯ ಪ್ರಾಧಿಕಾರ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪಿಸಲಾದ ಅಥವಾ ರಾಜ್ಯ ಅಧಿನಿಯಮದ ಅಥವಾ ಕೇಂದ್ರ ಅಧಿನಿಯಮದ ಅಡಿಯಲ್ಲಿನ ಸರ್ಕಾರದಿಂದ ಸ್ಥಾಪಿತವಾಗಿದ್ದು ಮತ್ತು ಸರ್ಕಾರವು ಒಡೆತನ ಹೊಂದಿರುವ ಅಥವಾ ನಿಯಂತ್ರಣ ಹೊಂದಿರುವ ನಿಗಮದ ಅಡಿಯಲ್ಲಿ ಹುದ್ದೆಯನ್ನು ಧಾರಣ ಮಾಡಿರುವ ಅಥವಾ ಧಾರಣ ಮಾಡಿದ್ದ ಅಭ್ಯರ್ಥಿಯ ಸಂದರ್ಭದಲ್ಲಿ ಆತ ಅಂಥ ಹುದ್ದೆಯನ್ನು ಧಾರಣ ಮಾಡಿರುವುಷ್ಟು ಅಥವಾ ಧಾರಣ ಮಾಡಿದ್ದಷ್ಟು ಅಥವಾ ಹತ್ತು ವರ್ಷಗಳು ಇವುಗಳಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು:

ಸಿ) ಮಾಜಿ ಸೈನಿಕನಾಗಿರುವ ಅಭ್ಯರ್ಥಿಯ ಸಂದರ್ಭದಲ್ಲಿ ಮೂರು ವರ್ಷಗಳು ಮತ್ತು ಇದಕ್ಕೆ ಕೇಂದ್ರದ ಸಶಸ್ತ್ರ ಪಡೆಗಳಲ್ಲಿ ಅವನು ಸೇವೆ ಸಲ್ಲಿಸಿರುವಷ್ಟು ವರ್ಷಗಳನ್ನು ಸೇರಿಸಬೇಕು.

ಡಿ) ಅಂಗವಿಕಲನಾಗಿರುವ ಅಭ್ಯರ್ಥಿಯ ಸಂದರ್ಭದಲ್ಲಿ ಹತ್ತು ವರ್ಷಗಳು:

ಇ) ಅಭ್ಯರ್ಥಿ ವಿಧವೆಯಾಗಿರುವಾಗ, ಹತ್ತು ವರ್ಷಗಳು:

ಎಫ್) ಜೀತ ಕಾರ್ಮಿಕನಾಗಿದ್ದ ಅಭ್ಯರ್ಥಿಯ ಸಂದರ್ಭದಲ್ಲಿ ಹತ್ತು ವರ್ಷಗಳು:

ಕರ್ನಾಟಕ ಸರ್ಕಾರಿ ಸೇವಾ (ಸಾಮಾನ್ಯ ನೇಮಕಾತಿ) ನಿಯಮಾವಳಿಗಳು 1977ರ ನಿಯಮ 6 ರಂತೆ ವಯೋಮಿತಿಯನ್ನು ಅದರಲ್ಲಿ ತಿಳಿಸಿರುವ ಮಟ್ಟಿಗೆ ಸಂಬಂಧಪಟ್ಟ ದಾಖಲೆ ಒದಗಿಸಿದಲ್ಲಿ ಹೆಚ್ಚಿಸುವ ಬಗ್ಗೆ ಪರಿಶೀಲಿಸಲಾಗುವುದು.

8. **ಜಾತಿ ಮೀಸಲಾತಿ ಪ್ರಮಾಣ ಪತ್ರಗಳು :**

ಜಾತಿ ಮೀಸಲಾತಿ ಕೋರಬಯಸುವ ಅಭ್ಯರ್ಥಿಗಳು

* ಪ.ಜಾ./ಪ.ಪಂ. ಅಭ್ಯರ್ಥಿಗಳು ನಮೂನೆ 'ಡಿ' ಯಲ್ಲಿ
* ಪ್ರವರ್ಗ–1 ರ ಅಭ್ಯರ್ಥಿಗಳು ನಮೂನೆ 'ಇ' ಯಲ್ಲಿ ಹಾಗೂ
* 2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳು ನಮೂನೆ 'ಎಫ್' ರಲ್ಲಿ

ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕ: 31–03–2020 ರೊಳಗೆ ಸಂಬಂಧಿತ ತಹಸೀಲ್ದಾರ್ ರವರಿಂದ ಚಾಲ್ತಿಯಲ್ಲಿರುವ ನಮೂನೆಯಲ್ಲಿ ಪ್ರಮಾಣ ಪತ್ರವನ್ನು ಪಡೆದು (ಉದ್ಯೋಗದ ಉದ್ದೇಶಕ್ಕಾಗಿ ಪಡೆದಿರತಕ್ಕದ್ದು) ಪರಿಶೀಲನಾ ದಿನಾಂಕದಂದು ಮೂಲ ದಾಖಲೆಗಳನ್ನು ಕಡ್ಡಾಯವಾಗಿ ಹಾಜರುಪಡಿಸುವುದು.

9. **ಮಾಜಿ ಸೈನಿಕರ ಕುಟುಂಬದ ಅಭ್ಯರ್ಥಿಗಳು :**

ಮಾಜಿ ಸೈನಿಕರು ಅಥವಾ ಮಾಜಿ ಸೈನಿಕರ ಕುಟುಂಬದ ಅಭ್ಯರ್ಥಿಗಳ ಮೀಸಲಾತಿ ಕೋರಬಯಸುವ ಅಭ್ಯರ್ಥಿಗಳು, ಮಾಜಿ ಸೈನಿಕರು(ಭೂ, ನೌಕಾ, ವಾಯುದಳದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ) ಎನ್ನುವ ಬಗ್ಗೆ ಅಥವಾ ಭಾರತ ದೇಶದ ಒಕ್ಕೂಟ ಸಶಸ್ತ್ರ ದಳದಲ್ಲಿ ಸೇವೆ ಸಲ್ಲಿಸಿರುತ್ತಿರುವಾಗ ಮರಣ ಹೊಂದಿದ ಅಥವಾ ಶಾಶ್ವತವಾಗಿ ಅಂಗಹೀನರಾದ ವ್ಯಕ್ತಿಗಳ ಕುಟುಂಬದ ಸದಸ್ಯರು ಎಂಬ ಬಗ್ಗೆ ಸಕ್ಷಮ ಮಿಲಿಟರಿ ಅಧಿಕಾರಿಗಳಿಂದ ಪ್ರಮಾಣ ಪತ್ರವನ್ನು ಪಡೆದಿರಬೇಕು. ಈ ಪ್ರಮಾಣ ಪತ್ರದ ನಮೂನೆಯನ್ನು ಲಗತ್ತಿಸಿದೆ. ಈ ಪ್ರಮಾಣ ಪತ್ರವನ್ನು ಪರಿಶೀಲನಾ ದಿನಾಂಕದಂದು ಕಡ್ಡಾಯವಾಗಿ ಹಾಜರುಪಡಿಸುವುದು.

10. **ಗ್ರಾಮೀಣ ಅಭ್ಯರ್ಥಿ :**

ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಿಯಮಗಳ ರೀತ್ಯ 1 ರಿಂದ 10 ನೇ ತರಗತಿಯವರೆಗೆ ನಿರಂತರವಾಗಿ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು ಈ ಮೀಸಲಾತಿಯನ್ನು ಪಡೆಯಲು ಅರ್ಹರು.

ಗ್ರಾಮೀಣ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ್ದ ಹುದ್ದೆಗಳನ್ನು ಕ್ಲೈಮ್ ಮಾಡುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ನಮೂನೆ–2 ರ ಪ್ರಮಾಣ ಪತ್ರವಲ್ಲದೇ, ಮೇಲುಸ್ಥರಕ್ಕೆ ಸೇರಿಲ್ಲದಿರುವ ಬಗ್ಗೆ ನಮೂನೆ–1 ರಲ್ಲಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಂಬಂಧಿಸಿದ ತಹಸೀಲ್ದಾರ್‌ರವರಿಂದ ಹಾಗೂ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಠ ಜಾತಿ, ಪರಿಶಿಷ್ಠ ಪಂಗಡ, ಪ್ರವರ್ಗ–1, ಪ್ರವರ್ಗ–2ಎ, ಪ್ರವರ್ಗ–2ಬಿ, ಪ್ರವರ್ಗ–3ಎ, ಪ್ರವರ್ಗ–3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವನ್ನು ನಮೂನೆ–2 ರಲ್ಲಿ ನಿಗದಿತ ಪ್ರಾಧಿಕಾರಿಗಳಿಂದ ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರಿಂದ ಮೇಲು ರುಜು ಮತ್ತು ಮೊಹರು ಮಾಡಿಸಿಕೊಂಡು, ಪರಿಶೀಲನಾ ದಿನಾಂಕದಂದು ಕಡ್ಡಾಯವಾಗಿ ತಪ್ಪದೆ ಹಾಜರುಪಡಿಸುವುದು.

11. **ಕನ್ನಡ ಮಾಧ್ಯಮ ಅಭ್ಯರ್ಥಿ :**

ಕನ್ನಡ ಮಾಧ್ಯಮದ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳನ್ನು ಕ್ಲೈಮ್ ಮಾಡುವ ಅಭ್ಯರ್ಥಿಗಳು 1ನೇ ತರಗತಿಯಿಂದ 10ನೇ ತರಗತಿಯವರೆಗೆ ನಿರಂತರವಾಗಿ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಹಾಗೂ ಮೊಹರು ಪಡೆದ ಪ್ರಮಾಣ ಪತ್ರವನ್ನು ಪರಿಶೀಲನಾ ದಿನಾಂಕದಂದು ಹಾಜರುಪಡಿಸುವುದು.

12. **ಅಂಗವಿಕಲ ಅಭ್ಯರ್ಥಿ :**

ಸರ್ಕಾರದ ಅಧಿಸೂಚನೆ ಸಂಖ್ಯೆ : ಡಿಪಿಎಆರ್ 52 ಎಸ್‌ಆರ್‌ಆರ್ 1999, ಬೆಂಗಳೂರು, ದಿನಾಂಕ: 29/11/2002 ಮತ್ತು ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿ.ಪಿ.ಎ.ಆರ್.54ಎಸ್.ಆರ್.ಆರ್. ದಿನಾಂಕ: 23/6/2012 ರನ್ವಯ, ಗ್ರಾಮಲೆಕ್ಕಿಗರ ಹುದ್ದೆಯಲ್ಲಿ ಅಂಗವಿಕಲರ ಮೀಸಲಾತಿಯನ್ನು ಈ ಕೆಳಕಂಡ ವರ್ಗಗಳಿಗೆ ಮಾತ್ರ ಕಲ್ಪಿಸಲಾಗಿದೆ.

* **ಕುಷ್ಟರೋಗದಿಂದ ಗುಣಮುಖರಾದವರು. (Leprosy cured)**
* **ಶ್ರವಣ ದೋಷವುಳ್ಳವರು. (Hearing impaired)**
* **ಮಾನಸಿಕ ಅಸ್ವಸ್ಥತೆ. (Mentally ill)**
* **ಚಲನವಲನ ವೈಕಲ್ಯ. (Locomotor disability)**

**ಮೇಲಿನ ಸರ್ಕಾರಿ ಆದೇಶದಂತೆ ಈ ಮೇಲಿನ ಅಂಗವಿಕಲತೆಗಳನ್ನು ಹೊರತುಪಡಿಸಿ ಇತರೆ ಅಂಗವಿಕಲತೆವುಳ್ಳ ಅಭ್ಯರ್ಥಿಗಳು ಗ್ರಾಮಲೆಕ್ಕಿಗರ ಹುದ್ದೆಗೆ ಅಂಗವಿಕಲರ ಮೀಸಲಾತಿಯಡಿ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ.**

ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು, 1977 ರ ನಿಯಮ 9(1–ಎ) ರ ಅನ್ವಯ ರಾಜ್ಯ ಸಿವಿಲ್ ಸೇವೆಯಲ್ಲಿನ ಗ್ರೂಪ್–ಸಿ ಹುದ್ದೆಗಳ ನೇರ ನೇಮಕಾತಿಯಲ್ಲಿ ಅಂಗವಿಕಲರಿಗೆ ಶೇಕಡಾ 5 ರಷ್ಟು ಸಮತಳ ಮೀಸಲಾತಿ ಕಲ್ಪಿಸಲಾಗಿದೆ. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 128 ಸೆನೆನಿ 2006 ದಿನಾಂಕ: 1/8/2009 ರನ್ವಯ ಮೀಸಲಾತಿ ನೀಡಲಾಗುವುದು. ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ : ಸಿಆಸುಇ 115 ಸೆನೆನಿ 2005, ದಿನಾಂಕ: 19/11/2005 ರಲ್ಲಿ ನಿಗದಿ ಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಸಂಬಂಧಪಟ್ಟ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯು ನೀಡುವ ಪ್ರಮಾಣ ಪತ್ರವನ್ನು ಪಡೆದುಕೊಂಡಿರತಕ್ಕದ್ದು. ಬೇರೆ ಯಾವುದೇ ನಮೂನೆಗಳಲ್ಲಿ ಪಡೆಯಲಾಗಿರುವ ಪ್ರಮಾಣ ಪತ್ರಗಳನ್ನು ಹಾಗೂ ಗುರುತಿನ ಚೀಟಿಯನ್ನು ಪರಿಗಣಿಸಲಾಗುವುದಿಲ್ಲ. ಈ ಪ್ರಮಾಣ ಪತ್ರದ ನಮೂನೆಯನ್ನು ಲಗತ್ತಿಸಿದೆ. ಈ ಪ್ರಮಾಣ ಪತ್ರವನ್ನು ಪರಿಶೀಲನಾ ದಿನಾಂಕದಂದು ಹಾಜರುಪಡಿಸುವುದು.

### 13. ಯೋಜನೆಗಳಿಂದ ನಿರಾಶ್ರಿತ ಅಭ್ಯರ್ಥಿ :

ಯೋಜನೆಗಳಿಂದ ನಿರ್ವಸಿತರಾದ ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳನ್ನು ಕೋರುವ ಅಭ್ಯರ್ಥಿಗಳು ಸಂಬಂಧಿಸಿದ ತಹಸೀಲ್ದಾರ್ ರವರಿಂದ ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 23 ಎಸ್ಆರ್ಆರ್ 99 ದಿನಾಂಕ: 23/11/2000 ರನ್ವಯ ಈ ಮೀಸಲಾತಿಯಡಿಯಲ್ಲಿ ಕ್ಲೈಮು ಮಾಡುವ ಅಭ್ಯರ್ಥಿಗಳು ಸರ್ಕಾರದ ಆದೇಶದ ಸಂಖ್ಯೆ: ಸಿಆಸುಇ 44 ಸೇಸೇನಿ 2001 ದಿನಾಂಕ: 27/07/2001 ರಲ್ಲಿ ತಿಳಿಸಿರುವಂತೆ ನಿಗಧಿತ ನಮೂನೆಯಲ್ಲಿ ಸಲ್ಲಿಸತಕ್ಕದ್ದು.

### 14. ಸೇವೆಯಲ್ಲಿರುವ ಅಭ್ಯರ್ಥಿ:

ರಾಜ್ಯ/ಕೇಂದ್ರ ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ಕರ್ನಾಟಕ ನಾಗರೀಕ ಸೇವೆಗಳು(ಸಾಮಾನ್ಯ ನೇಮಕಾತಿ) ನಿಯಮಗಳು 1977 ನಿಯಮ–11 ರೀತ್ಯಾ ಕಡ್ಡಾಯವಾಗಿ ತಮ್ಮ ಇಲಾಖಾ ಮುಖ್ಯಸ್ಥರಿಂದ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದೊಳಗೆ ನಿರಾಕ್ಷೇಪಣಾ ಪತ್ರವನ್ನು ಪಡೆದುಕೊಂಡಿರತಕ್ಕದ್ದು.

### 15. ಆಯ್ಕೆ ವಿಧಾನ :

ಕರ್ನಾಟಕ ಜನರಲ್ ಸರ್ವೀಸಸ್ (ರೆವಿನ್ಯೂ ಸಬೊರ್ಡಿನೇಟ್ ಬ್ರಾಂಚ್) (ಕೇಡರ್ ಅಂಡ್ ರೆಕ್ರ್ಯೂಟ್‌ಮೆಂಟ್) (ತಿದ್ದುಪಡಿ) ನಿಯಮಗಳು 2008 ಮತ್ತು ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977 ರ ಪ್ರಕಾರ ಅಭ್ಯರ್ಥಿಯು ಅವರ ಅರ್ಹತಾ ಪರೀಕ್ಷೆಯಲ್ಲಿ ಪಡೆದ ಅಂಕಗಳ (On Merit) ಆಧಾರದ ಮೇಲೆ ಆಯಾಯ ಪ್ರವರ್ಗಕ್ಕೆ ಸಂಬಂಧಿಸಿದಂತೆ ಆಯ್ಕೆ ಮಾಡಲಾಗುತ್ತದೆ.

### 16. ಅರ್ಹತಾ ಷರತ್ತುಗಳು :

ಅ. ಅರ್ಜಿದಾರರು ಭಾರತೀಯ ನಾಗರೀಕನಾಗಿರತಕ್ಕದ್ದು.

ಆ. ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು, ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತವಾಗಿರಬೇಕು.

ಇ. ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ನೇಮಕಾತಿ ಸಮಿತಿ ಕಾಯ್ದಿರಿಸಿಕೊಂಡಿದೆ.

ಈ. ಅಭ್ಯರ್ಥಿಯು ಈ ಹಿಂದೆ ಯಾವುದೇ ಸರ್ಕಾರದ ಸೇವೆಯಿಂದ ವಜಾಗೊಂಡಿರಬಾರದು.

ನಿಗದಿತ ಶೈಕ್ಷಣಿಕ ಅರ್ಹತೆಯ ಜೊತೆಗೆ ಈ ಮೇಲ್ಕಂಡ ಅರ್ಹತೆಗಳನ್ನು ಹೊಂದಿರುವ ಅಭ್ಯರ್ಥಿಗಳು, ನೇಮಕಾತಿಗಾಗಿ ಅರ್ಜಿ ಸಲ್ಲಿಸಲು ಅರ್ಹತೆಯನ್ನು ಹೊಂದಿರುತ್ತಾರೆ.

### 17. ಪ್ರಮುಖವಾದ ಸೂಚನೆಗಳು :

1. ಅರ್ಜಿ ಸಲ್ಲಿಸುವಾಗ ನಮೂದಿಸಿರುವ ಹಾಗೂ ಮೀಸಲಾತಿ ಕೋರಿರುವ ಪ್ರಮಾಣ ಪತ್ರಗಳು ಅಂದರೆ–
   - ಹುದ್ದೆಯ ನೇಮಕಾತಿಗಾಗಿ ನಿಗಧಿಪಡಿಸಲಾದ ದ್ವಿತೀಯ ಪಿ.ಯು.ಸಿ. ಅಥವಾ CBSE(Central Board of Secondary Education, New Delhi) ಅಥವಾ ICSE (Indian Certificate of Secondary Education, New Delhi) ನಡೆಸುವ 12 ನೇ ತರಗತಿ ಪರೀಕ್ಷೆಯ ಅಂಕಪಟ್ಟಿ.
   - ಜನ್ಮ ದಿನಾಂಕದ ಸಮರ್ಥನೆಗಾಗಿ ಎಸ್.ಎಸ್.ಎಲ್.ಸಿ. ಅಂಕಪಟ್ಟಿ ಅಥವಾ ಕ್ಯುಮೂಲೇಟಿವ್ ದಾಖಲೆ.
   - ಸೈನಿಕ ಸೇವೆಯಿಂದ ಬಿಡುಗಡೆ ಹೊಂದಿದ/ಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರ ಹಾಗೂ ಮಾಜಿ ಸೈನಿಕ ಕುಟುಂಬ ಸದಸ್ಯರು ಸಕ್ಷಮ ಮಿಲಿಟರಿ ಅಧಿಕಾರಿಗಳಿಂದ/ ಜಿಲ್ಲಾ ಮಾಜಿ ಸೈನಿಕ ಕಲ್ಯಾಣ ಸಮಿತಿಗಳಿಂದ ಪಡೆದ ಪ್ರಮಾಣ ಪತ್ರ
   - ಸೇವೆಯಲ್ಲಿರುವ ಅಭ್ಯರ್ಥಿಗಳು ಇಲಾಖಾ ಮುಖ್ಯಸ್ಥರಿಂದ ಪಡೆದ ನಿರಾಕ್ಷೇಪಣಾ ಪ್ರಮಾಣ ಪತ್ರ.
   - ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, 2ಎ, 2ಬಿ, 3ಎ, 3ಬಿ ಮೀಸಲಾತಿಯ ಪ್ರಮಾಣ ಪತ್ರಗಳು.

- ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ.
- ಕನ್ನಡ ಮಾಧ್ಯಮ ವ್ಯಾಸಂಗ ಪ್ರಮಾಣ ಪತ್ರ.
- ಯೋಜನಾ ನಿರಾಶ್ರಿತ ಪ್ರಮಾಣ ಪತ್ರ.
- ವಿಧವೆಯರು, ಜೀತ ಕಾರ್ಮಿಕರು ಇವರು ಸಕ್ಷಮ ಪ್ರಾಧಿಕಾರದಿಂದ (ತಹಸೀಲ್ದಾರ್, ಕಾರ್ಮಿಕ ಇಲಾಖೆಯ ಅಧಿಕಾರಿಗಳು) ಪಡೆದ ಪ್ರಮಾಣ ಪತ್ರ.
- ಅಂಗವಿಕಲ ಅಭ್ಯರ್ಥಿಗಳು ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪಡೆದ ಪ್ರಮಾಣ ಪತ್ರ.
- ಕಂಪ್ಯೂಟರ್ ಜ್ಞಾನ ಹೊಂದಿರುವ ಬಗ್ಗೆ ಸರ್ಕಾರದಿಂದ ಮಾನ್ಯತೆ ಪಡೆದ ಕಂಪ್ಯೂಟರ್ ಕೇಂದ್ರದಿಂದ ಪಡೆದ ಪ್ರಮಾಣ ಪತ್ರ.
- ಅಭ್ಯರ್ಥಿಯು ಸ್ಥಳೀಯ ಇಬ್ಬರು ಗಣ್ಯ ವ್ಯಕ್ತಿಗಳಿಂದ ಪಡೆದ 06 ತಿಂಗಳೊಳಗಿನ ಇತ್ತೀಚಿನ ನಡತೆ ಪ್ರಮಾಣ ಪತ್ರ.
  ಮೇಲ್ಕಂಡ ದಾಖಲಾತಿಗಳನ್ನು ನಿಗಧಿಪಡಿಸಿದ ನಮೂನೆಗಳಲ್ಲಿ ಹಾಗೂ ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಅರ್ಹತೆಯನ್ನು ಪಡೆದಿರಬೇಕು. ನಿಗಧಿಪಡಿಸಲಾದ ಕೊನೆಯ ದಿನಾಂಕದ ನಂತರ ಪಡೆದ ದಾಖಲಾತಿಗಳು ಅರ್ಹತೆಯನ್ನು ಕಳೆದುಕೊಳ್ಳುತ್ತವೆ.

2. ಮೀಸಲಾತಿ ಇತ್ಯಾದಿಗಳ ಬಗ್ಗೆ ಅಭ್ಯರ್ಥಿಯು ಖಾತ್ರಿ ಪಡಿಸಿಕೊಂಡು ಅರ್ಜಿ ಸಲ್ಲಿಸುವುದು ಅವರ ವೈಯುಕ್ತಿಕ ಜವಾಬ್ದಾರಿಯಾಗಿರುತ್ತದೆ.
3. ಅರ್ಜಿ ಸಲ್ಲಿಸುವಾಗ ಅಭ್ಯರ್ಥಿಗಳು ಮುನ್ನೆಚ್ಚರಿಕೆ ವಹಿಸಬೇಕಾಗಿರುತ್ತದೆ. ಒಮ್ಮೆ ಅರ್ಜಿ ಸಲ್ಲಿಸಿ ಚಲನ್ ಪ್ರತಿ ಮುದ್ರಿತಗೊಂಡ ನಂತರ ನಮೂದುಗಳನ್ನು ತಿದ್ದುಪಡಿ ಮಾಡಲು ಅವಕಾಶವಿರುವುದಿಲ್ಲ.
4. ಒಬ್ಬ ಅಭ್ಯರ್ಥಿ ಒಂದಕ್ಕಿಂತ ಹೆಚ್ಚು ಆನ್‌ಲೈನ್ ಅರ್ಜಿಯನ್ನು ಸಲ್ಲಿಸಿದರೆ ಆ ಅಭ್ಯರ್ಥಿಯು ಶುಲ್ಕವನ್ನು ಪಾವತಿಸಿರುವ ಅರ್ಜಿಯನ್ನು ಆಯ್ಕೆ ಪ್ರಕ್ರಿಯೆಯಲ್ಲಿ ಮುಂದುವರೆಸಲಾಗುವುದು. ಹಾಗೂ ಉಳಿದೆಲ್ಲಾ ಆನ್‌ಲೈನ್ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
5. ಅರ್ಜಿಯಲ್ಲಿ ಅಭ್ಯರ್ಥಿಯು ನೀಡುವ ವಿಳಾಸವೇ ಅಂತಿಮವಾಗಿದ್ದು, ಎಲ್ಲಾ ಪತ್ರವ್ಯವಹಾರಗಳನ್ನು ಅದೇ ವಿಳಾಸಕ್ಕೆ ಕಳುಹಿಸಿಕೊಡಲಾಗುವುದು. ನಂತರದಲ್ಲಿ ವಿಳಾಸ ಬದಲಾವಣೆ ಬಗ್ಗೆ ಯಾವುದೇ ಪತ್ರವ್ಯವಹಾರವನ್ನು ಪರಿಗಣಿಸಲಾಗುವುದಿಲ್ಲ.
6. ಅರ್ಹ ಅಭ್ಯರ್ಥಿಗಳು ಅರ್ಜಿಯನ್ನು ಭರ್ತಿ ಮಾಡುವ ಮುನ್ನ ವೆಬ್‌ಸೈಟ್‌ನಲ್ಲಿ ತಿಳಿಸಿರುವ ಸೂಚನೆಗಳನ್ನು ಪಾಲಿಸುವುದು.
7. ಅಭ್ಯರ್ಥಿಯ ಹೆಸರು ಅಂತಿಮ ಆಯ್ಕೆಪಟ್ಟಿಯಲ್ಲಿ ಸೇರ್ಪಡೆಯಾಗಿದೆ ಎಂಬುದರ ಆಧಾರದ ಮೇಲೆ ಅಭ್ಯರ್ಥಿಗೆ ನೇಮಕಾತಿಯ ಹಕ್ಕು ದೊರೆಯುವುದಿಲ್ಲ.

**18. ದುರ್ನಡತೆ :**

ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಭಿಸಿರುವನೆಂದು ಕಂಡು ಬಂದಲ್ಲಿ, ಅವನು/ಅವಳು ಸ್ವತಃ ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ, ಹುದ್ದೆಯ ಆಯ್ಕೆಯಿಂದ ಅಭ್ಯರ್ಥಿತ್ವವನ್ನು ಅಸಿಂಧುಪಡಿಸಲಾಗುವುದು.

**19. ಷರತ್ತು :**

ಈ ಅಧಿಸೂಚನೆಯನ್ನು ಯಾವುದೇ ಕಾರಣವನ್ನು ನೀಡದೆ, ಯಾವುದೇ ಸಮಯದಲ್ಲಿ ರದ್ದುಗೊಳಿಸುವ, ಪರಿಷ್ಕರಿಸುವ, ಹುದ್ದೆಗಳ ಸಂಖ್ಯೆಯನ್ನು ಬದಲಾಯಿಸುವ ಅಧಿಕಾರವು ಅಧ್ಯಕ್ಷರು, ಗ್ರಾಮಲೆಕ್ಕಿಗರ ನೇರನೇಮಕಾತಿ ಆಯ್ಕೆ ಪ್ರಾಧಿಕಾರಕ್ಕೆ ಇರುತ್ತದೆ.

(ಆರ್.ಗಿರೀಶ್, ಭಾ.ಆ.ಸೇ)
**ಅಧ್ಯಕ್ಷರು,**
**ಗ್ರಾಮಲೆಕ್ಕಿಗರ ನೇರನೇಮಕಾತಿ ಆಯ್ಕೆ ಪ್ರಾಧಿಕಾರ**
**ಮತ್ತು ಜಿಲ್ಲಾಧಿಕಾರಿಗಳು ಹಾಸನ ಜಿಲ್ಲೆ, ಹಾಸನ.**

**ಸಂಕಲನಕಾರರು, ಸರ್ಕಾರಿ ಹೊರವಲಯ ಮುದ್ರಣಾಲಯ, ಆರ್.ವಿ.ಕಾಲೇಜ್ ಅಂಚೆ, 8ನೇ ಮೈನ್, ಮೈಸೂರು ರಸ್ತೆ, ಕೆಂಗೇರಿ, ಬೆಂಗಳೂರು–560059,** ಇವರಿಗೆ ಕಳುಹಿಸುತ್ತಾ, ಈ ಅಧಿಸೂಚನೆಯನ್ನು ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಲು ಕೋರಿದೆ.

ಪ್ರತಿಯನ್ನು:-

1. ಮುಖ್ಯ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ಬೆಂಗಳೂರು ರವರ ಅವಗಾಹನೆಗೆ ಸಲ್ಲಿಸಿದೆ.
2. ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಸೇವೆಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು ರವರ ಅವಗಾಹನೆಗೆ ಸಲ್ಲಿಸಿದೆ.
3. ಮಹಾಲೇಖಪಾಲರು, ಬೆಂಗಳೂರು ರವರ ಅವಗಾಹನೆಗೆ ಸಲ್ಲಿಸಿದೆ.
4. ಪ್ರಾದೇಶಿಕ ಆಯುಕ್ತರು, ಮೈಸೂರು ರವರ ಅವಗಾಹನೆಗೆ ಸಲ್ಲಿಸಿದೆ.
5. ರಾಜ್ಯ ಆಯುಕ್ತರು, ರಾಜ್ಯ ಅಂಗವಿಕಲ ವ್ಯಕ್ತಿಗಳ ಆಯುಕ್ತರ ಕಛೇರಿ, ಬೆಂಗಳೂರು. (ನಂ.-40. ತಂಬುಚೆಟ್ಟಿ ರಸ್ತೆ, ಕಾಕ್ಸ್ ಟೌನ್, ಬೆಂಗಳೂರು-560005, ಕರ್ನಾಟಕ) ರವರಿಗೆ ಸಲ್ಲಿಸಿದೆ.
6. ರಾಜ್ಯ ಸರ್ಕಾರದ www.karnataka.gov.in ಜಾಲತಾಣಕ್ಕೆ ಪ್ರಕಟಣೆಗಾಗಿ.
7. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಕಳುಹಿಸುತ್ತಾ, ತಮ್ಮ ಕಾರ್ಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.
8. ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಗಳು, ಹಾಸನ ಜಿಲ್ಲೆ, ಹಾಸನ ರವರಿಗೆ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
9. ಜಿಲ್ಲಾ ಹಿಂದುಳಿದ ವರ್ಗಗಳ ಹಾಗೂ ಅಲ್ಪ ಸಂಖ್ಯಾತರ ಕಲ್ಯಾಣಾಧಿಕಾರಿಗಳು, ಹಾಸನ ಜಿಲ್ಲೆ, ಹಾಸನ.
10. ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಹಾಸನ ಜಿಲ್ಲೆ, ಹಾಸನ.
11. ಉಪವಿಭಾಗಾಧಿಕಾರಿಗಳು, ಹಾಸನ/ಸಕಲೇಶಪುರರವರಿಗೆ ಕಳುಹಿಸುತ್ತಾ, ತಮ್ಮ ಕಾರ್ಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.
12. ಜಿಲ್ಲೆಯ ಎಲ್ಲಾ ತಹಸೀಲ್ದಾರರುಗಳಿಗೆ ಕಳುಹಿಸುತ್ತಾ, ತಮ್ಮ ಕಾರ್ಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.
13. ಈ ಕಾರ್ಯಾಲಯದ ಸೂಚನಾ ಫಲಕಕ್ಕೆ.
14. ಹೆಚ್ಚುವರಿ ಪ್ರತಿಗಳು ಶಾಖಾ ಕಡತಕ್ಕೆ.

ಅನುಬಂಧ–2

(ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)

ನಮೂನೆ–ಡಿ

(ನಿಯಮ 3ಎ (2) (3) ನೋಡಿ)

ಅನುಸೂಚಿತ ಜಾತಿ ಅಥವಾ ಅನುಸೂಚಿತ ಬುಡಕಟ್ಟುಗಳಿಗೆ (ಪ.ಜಾ/ಪ.ಪಂ) ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರಗಳ ನಮೂನೆ

ಪ್ರಮಾಣ ಪತ್ರ

.................................................... ರಾಜ್ಯದ / ಕೇಂದ್ರಾಡಳಿತ ಪ್ರದೇಶದ * .............................. ಜಿಲ್ಲೆಯ / ವಿಭಾಗದ ............................................ ಗ್ರಾಮ / ಪಟ್ಟಣದ * ನಿವಾಸಿಯಾದ ಶ್ರೀ / ಶ್ರೀಮತಿ ............................... ಎಂಬುವವರ ಮಗ / ಮಗಳಾದ ಶ್ರೀ / ಶ್ರೀಮತಿ ............................... ಇವರು ಅನುಸೂಚಿತ ಜಾತಿ/ಅನುಸೂಚಿತ ಬುಡಕಟ್ಟು * ಎಂದು ಮಾನ್ಯ ಮಾಡಲಾಗಿರುವ ಜಾತಿ/ಬುಡಕಟ್ಟಿಗೆ * ಸೇರಿರುತ್ತಾರೆಂದು ಪ್ರಮಾಣೀಕರಿಸಿದೆ.

ಸಂವಿಧಾನ (ಅನುಸೂಚಿತ ಜಾತಿಗಳು) ಆದೇಶ, 1950
ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) ಆದೇಶ, 1950
ಸಂವಿಧಾನ (ಅನುಸೂಚಿತ ಜಾತಿ) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1950
ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1951

(ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ ಪಟ್ಟಿ (ಮಾರ್ಪಾಡು) ಆದೇಶ 1956, ಮುಂಬಯಿ ರಾಜ್ಯ ಪುನರ್ ರಚನಾ ಅಧಿನಿಯಮ, 1960, ಪಂಜಾಬ್ ರಾಜ್ಯ ಪುನರ್ ರಚನಾ ಅಧಿನಿಯಮ, 1966, ಹಿಮಾಚಲ ಪ್ರದೇಶ ರಾಜ್ಯ ಅಧಿನಿಯಮ, 1970 ಮತ್ತು ಈಶಾನ್ಯ ಪ್ರದೇಶಗಳ (ಪುನರ್ ರಚನಾ ಅಧಿನಿಯಮ, 1971ರ ಮೂಲ ತಿದ್ದುಪಡಿಯಾದಂತೆ)

ಸಂವಿಧಾನ
ಸಂವಿಧಾನ (ಜಮ್ಮು ಮತ್ತು ಕಾಶ್ಮೀರ) ಅನುಸೂಚಿತ ಜಾತಿಗಳ ಆದೇಶ, 1956
ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ (ತಿದ್ದುಪಡಿ) ಅಧಿನಿಯಮ, 1976ರ ಮೂಲಕ
ತಿದ್ದುಪಡಿಯಾದಂತೆ ಸಂವಿಧಾನ (ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳ) ಅನುಸೂಚಿತ ಬುಡಕಟ್ಟುಗಳ ಆದೇಶ, 1959.
ಸಂವಿಧಾನ (ದಾದರ್ ಮತ್ತು ನಾಗರಹವೇಲಿ) ಅನುಸೂಚಿತ ಜಾತಿಗಳ ಆದೇಶ 1962
ಸಂವಿಧಾನ (ಪಾಂಡಿಚೇರಿ) ಅನುಸೂಚಿತ ಜಾತಿಗಳ ಆದೇಶ, 1964
ಸಂವಿಧಾನ (ಅನುಸೂಚಿತ ಬುಡಕಟ್ಟುಗಳ) (ಉತ್ತರ ಪ್ರದೇಶ) ಆದೇಶ, 1967
ಸಂವಿಧಾನ (ಗೋವಾ, ದಮನ್ ಮತ್ತು ದೀವ್) ಅನುಸೂಚಿತ ಜಾತಿ/ಬುಡಕಟ್ಟುಗಳ ಆದೇಶ 1988
ಸಂವಿಧಾನ (ನಾಗಾಲ್ಯಾಂಡ್) ಅನುಸೂಚಿತ ಬುಡಕಟ್ಟುಗಳ ಆದೇಶ

2. ಶ್ರೀ/ಶ್ರೀಮತಿ/ಕುಮಾರಿ * ........................................................ ಮತ್ತು / ಅಥವಾ ಅವನ* / ಅವಳ* ಕುಟುಂಬವು ..............................................................................ರಾಜ್ಯ/ಕೇಂದ್ರಾಡಳಿತ ಪ್ರದೇಶದ ............................................................ ಜಿಲ್ಲಾ/ವಿಭಾಗದ .......................................ಗ್ರಾಮ/ಪಟ್ಟಣದ ಸಾಮಾನ್ಯ ನಿವಾಸಿ (ಗಳು)

ಸಹಿ...................................................

ತಹಶೀಲ್ದಾರ್.........................................

ಸ್ಥಳ :
ದಿನಾಂಕ:

ಪದನಾಮ
ಕಛೇರಿಯ ಮೊಹರಿನೊಂದಿಗೆ

ರಾಜ್ಯ /ಕೇಂದ್ರಾಡಳಿತ ಪ್ರದೇಶ *
* ಅನ್ವಯವಾಗದಿರುವ ಪದಗಳನ್ನು ದಯವಿಟ್ಟು ಬಿಟ್ಟು ಬಿಡಿ / ಹೊಡೆದು ಹಾಕಿ

ಸೂಚನೆ: ಇಲ್ಲಿ ಉಪಯೋಗಿಸಿದ 'ಸಾಮಾನ್ಯನಿವಾಸಿಗಳು' ಎಂಬಪದಾವಳಿಯುಪ್ರಜಾಪ್ರಾತಿನಿಧ್ಯ ಅಧಿನಿಯಮ, 1950ರ 20ನೇಪ್ರಕರಣದಲ್ಲಿರುವ ಅರ್ಥವನ್ನೇಹೊಂದಿರುತ್ತದೆ.

ಭಾರತ ಸರ್ಕಾರದ ಪತ್ರ ಸಂಖ್ಯೆ: ಬಿಸಿ 12028/2/76–ಎಸ್‌ಸಿಟಿ–1 ಗೃಹ ಮಂತ್ರಾಲಯ ಅನುಸಾರವಾಗಿ, ಅಂಥ ಪ್ರಮಾಣ ಪತ್ರಗಳನ್ನು ನೀಡಲು ಸಕ್ಷಮವಾಗಿರುವುದಕ್ಕಾಗಿ, ಭಾರತ ಸರ್ಕಾರದ (ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ) ಪತ್ರ ಸಂಖ್ಯೆ:13–2–74 ಇಎಸ್‌ಟಿ (ಎಸ್‌ಸಿಟಿ) ದಿನಾಂಕ: 05.08.1975ರಲ್ಲಿ ನಮೂದಿಸಿದ ಪ್ರಾಧಿಕಾರಿಯು, ರಾಷ್ಟ್ರಪತಿಗಳು ಸಂಬಂಧಪಟ್ಟ ಆದೇಶದ ಅಧಿಸೂಚನೆಯನ್ನು ಹೊರಡಿಸಿದ ಸಮಯದಲ್ಲಿ ಪ್ರಮಾಣ ಪತ್ರಕ್ಕಾಗಿ ಅರ್ಜಿ ಸಲ್ಲಿಸಿದ ವ್ಯಕ್ತಿಯು, ತನ್ನ ಖಾಯಂ ವಾಸ ಸ್ಥಳವನ್ನು ಹೊಂದಿದ್ದ ಸ್ಥಳಕ್ಕೆ ಸೇರಿದವರೊಬ್ಬರಾಗಿರತಕ್ಕದ್ದು. ಅದೇ ರೀತಿಯಲ್ಲಿ ಒಂದು ತಾಲ್ಲೂಕಿನ ರೆವಿನ್ಯೂ ಪ್ರಾಧಿಕಾರಿಯು ಇನ್ನೊಂದು ತಾಲ್ಲೂಕಿಗೆ ಸೇರಿದ ವ್ಯಕ್ತಿಗಳಿಗೆ ಸಂಬಂಧಪಟ್ಟ ಪ್ರಮಾಣ ಪತ್ರವನ್ನು ನೀಡಲು ಸಕ್ಷಮ ಪ್ರಾಧಿಕಾರಿಯಾಗುವುದಿಲ್ಲ.

---

(ಪ್ರವರ್ಗ–1 ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)
ನಮೂನೆ–ಇ
(ನಿಯಮ 3ಎ (2) (3) ನೋಡಿ)

ಹಿಂದುಳಿದ ವರ್ಗಗಳಿಗೆ (ಪ್ರವರ್ಗ–1) ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರ

________________ ಗ್ರಾಮ / ಪಟ್ಟಣದ / ನಗರ ನಿವಾಸಿಯಾದ ಶ್ರೀ / ಶ್ರೀಮತಿ ________________ ಇವರ ಮಗ / ಮಗಳು / ಪತ್ನಿ / ಪತಿಯಾದ ಶ್ರೀ / ಶ್ರೀಮತಿ ________________ ಇವರು ಹಿಂದುಳಿದ ವರ್ಗಗಳ (ಪ್ರವರ್ಗ) ________________ ಜಾತಿಯ ________________ ಉಪಜಾತಿಗೆ ಸೇರಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ:

ದಿನಾಂಕ :

ತಹಶೀಲ್ದಾರ್

________________ ತಾಲ್ಲೂಕು

ಕಛೇರಿಯ ಮೊಹರು

(ಪ್ರವರ್ಗ – 2ಎ, 2ಬಿ, 3ಎ, 3ಬಿ ಗೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)

ನಮೂನೆ – ಎಫ್

(ನಿಯಮ 3ಎ (2) (3)ನ್ನು ನೋಡಿ)

ಹಿಂದುಳಿದ ವರ್ಗಗಳಿಗೆ (2ಎ, 2ಬಿ. 3ಎ, 3ಬಿ) ಸೇರಿದ ಅಭ್ಯರ್ಥಿಗೆ ನೀಡುವ ಆದಾಯ ಮತ್ತು ಜಾತಿ ಪ್ರಮಾಣ ಪತ್ರ

____________________ ರಲ್ಲಿ ವಾಸವಾಗಿರುವ ಶ್ರೀ / ಶ್ರೀಮತಿ ________________ ಇವರ ಮಗ / ಮಗಳು / ಪತಿ / ಪತ್ನಿಯಾದ ಶ್ರೀ / ಶ್ರೀಮತಿ / ಕುಮಾರಿ ______________ ಇವರು ಮತ್ತು ಆತನ / ಅವಳ ತಂದೆ / ತಾಯಿ / ಪೋಷಕರು / ಪತ್ನಿ / ಪತಿಯು, ಸರ್ಕಾರಿ ಆದೇಶಗಳ ಸಂಖ್ಯೆ:ಎಸ್‌ಡಬ್ಲ್ಯೂಡಿ 225 ಬಿಸಿಎ 2000 ದಿನಾಮಕ: 30.03.2002 ರಲ್ಲಿ ನಿರ್ದಿಷ್ಟ ಪಡಿಸಿದ ಮೇಲುಸ್ತರದ (ಕ್ರೀಮಿ ಲೇಯರ್) ವ್ಯಾಪ್ತಿಯಲ್ಲಿ ಬರುವುದಿಲ್ಲವೆಂದು;

ಅಭ್ಯರ್ಥಿಯಾಗಲಿ ಅಥವಾ ಆತನ / ಆಕೆಯ ತಂದೆ ತಾಯಿ / ಪೋಷಕರಾಗಲಿ / ಪತ್ನಿ / ಪತಿಯಾಗಲಿ, ಸರ್ಕಾರದ ಸೇವೆಯಲ್ಲಿ 1 ನೇ ದರ್ಜೆಯ ಅಥವಾ 2ನೇ ದರ್ಜೆಯ ಅಧಿಕಾರಿಯಾಗಿಲ್ಲವೆಂದು;

ಅಥವಾ

ಸಾರ್ವಜನಿಕ ವಲಯ ಉದ್ಯಮಯಲ್ಲಿ ತತ್ಸಮಾನವಾದ ಹುದ್ದೆಯನ್ನು ಹೊಂದಿರುವುದಿಲ್ಲ;

ಅಥವಾ

ಖಾಸಗಿ ನಿಯೋಜಕರ ಕೈಕೆಳಗೆ, 2ನೇ ದರ್ಜೆಯ ಅಧಿಕಾರಿಯ ಸಂಬಳಕ್ಕಿಂತ (ವೇತನ ಶ್ರೇಣಿ ರೂ.6000–12000/– ಪ್ರಾರಂಭಿಕ ಹಂತ) ಕಡಿಮೆಯಲ್ಲದ ಸಂಬಳವನ್ನು ಪಡೆಯುವ ನೌಕರನಾಗಿಲ್ಲವೆಂದು;

ಅಥವಾ

ಆತನ / ಆಕೆಯ ತಂದೆ ತಾಯಿ/ ಪೋಷಕರು / ಪತ್ನಿ / ಪತಿಯ ಆದಾಯವು ಎಂಟು ಲಕ್ಷಮೀರುವುದಿಲ್ಲವೆಂದು;

ಅಥವಾ

ಕರ್ನಾಟಕ ಭೂ ಸುಧಾರಣಾ ಅಧಿನಿಯಮ 1961 ರಲ್ಲಿ ನಿಗದಿಪಡಿಸಿರುವಂತೆ ಆತನ / ಆಕೆಯ ತಂದೆ ತಾಯಿ / ಪೋಷಕರು / ಪತ್ನಿ / ಪತಿಯು ಮಾರಾಟ ತೆರಿಗೆದಾರನಲ್ಲ ಅಥವಾ ಆತನ / ಆಕೆಯ ತಂದೆ ತಾಯಿ / ಪೋಷಕ / ಪತ್ನಿ / ಪತಿಯು ಅಥವಾ ಇವರಿಬ್ಬರೂ 10 ಯುನಿಟ್‌ಗಿಂತ ಹೆಚ್ಚಿನ ಕೃಷಿ ಭೂಮಿ ಅಥವಾ 25 ಎಕರೆಗಳಿಗಿಂತ ಹೆಚ್ಚಿನ ಪ್ಲಾಂಟೇಶನ್ ಭೂಮಿಯನ್ನು ಹೊಂದಿರುವುದಿಲ್ಲವೆಂದು ಪ್ರಮಾಣೀಕರಿಸಲಾಗಿದೆ. ಸರ್ಕಾರಿ ಆದೇಶ ಸಂಖ್ಯೆ: ಎಸ್‌ಡಬ್ಲ್ಯೂಡಿ 225 ಬಿಸಿಎ 2000 ದಿನಾಂಕ: 30.03.2002ರ ಅನ್ವಯ ಶ್ರೀ / ಶ್ರೀಮತಿ / ಕುಮಾರಿ______________ಇವರು ____________ ಜಾತಿಗೆ ________________ ಸೇರಿದ ಉಪಜಾತಿಯವರಾಗಿದ್ದು ಸರ್ಕಾರಿ ಆದೇಶ ಸಂಖ್ಯೆ: ಎಸ್‌ಡಬ್ಲ್ಯೂಡಿ 225 ಬಿಸಿಎ 2000 ದಿನಾಂಕ: 30.03.2002ರ ಅನ್ವಯ ಹಿಂದುಳಿದ ವರ್ಗಗಳ ಪ್ರವರ್ಗ ______________ (2ಎ, 2ಬಿ, 3ಎ, 3ಬಿ)ಕ್ಕೆ ಸೇರಿರುತ್ತಾರೆ.

ಸ್ಥಳ :
ದಿನಾಂಕ:

ತಹಶೀಲ್ದಾರ್
____________ತಾಲ್ಲೂಕು
ಕಛೇರಿಯ ಮೊಹರು

ನಮೂನೆ–1

ಜನರಲ್ ಮೆರಿಟ್ ಅಭ್ಯರ್ಥಿಗಳು ಮೇಲುಸ್ತರಕ್ಕೆ ಸೇರಿಲ್ಲವೆಂದು, ದೃಢೀಕರಿಸಿ ಗ್ರಾಮೀಣ ಮೀಸಲಾತಿಯನ್ನು ಕೋರಲು ಸಲ್ಲಿಸಬೇಕಾದ ಪ್ರಮಾಣ ಪತ್ರ
(ಜನರಲ್ ಮೆರಿಟ್ ಅಭ್ಯರ್ಥಿಗಳು ಭರ್ತಿ ಮಾಡಬೇಕಾದ ನಮೂನೆ)

ಇವರಿಗೆ:
ತಹಶೀಲ್ದಾರರು
________________ತಾಲ್ಲೂಕು
________________ ಜಿಲ್ಲೆ

ಮಾನ್ಯರೆ,

ಶ್ರೀ / ಶ್ರೀಮತಿ ____________________________ ಎಂಬುವವರ ಮಗ / ಮಗಳು / ಪತಿ / ಪತ್ನಿ ____________________________ ಆದ ನಾನು ಮೇಲುಸ್ತರದಲ್ಲಿ (ಅಡಿಜಚಿಟಥಿ ಐಚಿಥಿಜಡಿ) ಬರುವುದಿಲ್ಲವೆಂದು ನೇರ ನೇಮಕಾತಿಯಲ್ಲಿ ಗ್ರಾಮೀಣ ಅಭ್ಯರ್ಥಿ ಮೀಸಲಾತಿಯನ್ನು ಪಡೆಯುವುದಕ್ಕಾಗಿ ಪ್ರಮಾಣ ಪತ್ರವನ್ನು ಪಡೆಯಲು ತಮ್ಮಲ್ಲಿ ಈ ಕೆಳಕಂಡ ಮಾಹಿತಿಗಳನ್ನು ಒದಗಿಸುತ್ತಾ ಕೋರುತ್ತೇನೆ.

1. ಅಭ್ಯರ್ಥಿಯ ಹೆಸರು ಮತ್ತು ಉದ್ಯೋಗ :
2. ಅಭ್ಯರ್ಥಿಯ ಸ್ವಂತ ಸ್ಥಳ ಗ್ರಾಮ :
   ತಾಲ್ಲೂಕು :
   ಜಿಲ್ಲೆ :
3. ಅಭ್ಯರ್ಥಿಯು ಹುಟ್ಟಿದ ದಿನಾಂಕ ವಯಸ್ಸು ಮತ್ತು ಹುಟ್ಟಿದ ಸ್ಥಳ :
4. ಅಭ್ಯರ್ಥಿಯ ತಂದೆ/ತಾಯಿ/ಪೋಷಕರ ಪತಿಯ/ಪತ್ನಿಯ ಹೆಸರು ಮತ್ತು ಉದ್ಯೋಗ :

   (ಉದ್ಯೋಗವು ಸರ್ಕಾರಿ/ಅರೆ ಸರ್ಕಾರಿ/ಸಾರ್ವಜನಿಕ ಉದ್ಯಮ/ಖಾಸಗಿ)

5. ಅಭ್ಯರ್ಥಿಯ ಪ್ರಸ್ತುತ ವಿಳಾಸ :
   (ಸ್ಪಷ್ಟವಾಗಿ ನಮೂದಿಸುವುದು)

6. ಅಭ್ಯರ್ಥಿಯ ಖಾಯಂ ವಿಳಾಸ :
7. ಅಭ್ಯರ್ಥಿಯ ಶಾಲಾ ಶಿಕ್ಷಣದ ವ್ಯಾಸಂಗ ಮಾಡಿದ ಶಾಲೆಗಳ ವಿವರಗಳು
   ಪ್ರಾಥಮಿಕ
   ಮಾಧ್ಯಮಿಕ
   ಪ್ರೌಢ

8. ಅಭ್ಯರ್ಥಿಯ ಹಾಗೂ ಅಭ್ಯರ್ಥಿಯ ತಂದೆ/ತಾಯಿ/ಪೋಷಕರ (ತಂದೆ/ತಾಯಿ ಜೀವಂತವಿಲ್ಲದಿದ್ದರೆ) ಇವರ ಒಟ್ಟು ವಾರ್ಷಿಕ ಆದಾಯ ಎಲ್ಲಾ ಮೂಲಗಳಿಂದ:
   1) ವೇತನ ಶ್ರೇಣಿ
   2) ಜಮೀನಿನ ವಿವರ
   3) ಇತರ ಮೂಲಗಳು

9. ಆದಾಯ ತೆರಿಗೆ ಪಾವತಿದಾರರೇ?

10. ಸಂಪತ್ತು ತೆರಿಗೆ ಪಾವತಿದಾರರೇ?

11. ಮಾರಾಟ ತೆರಿಗೆ ಪಾವತಿದಾರರೇ?

ಪ್ರಮಾಣೀಕೃತ ಘೋಷಣೆ

ಈ ಮೇಲೆ ನನ್ನಿಂದ ಒದಗಿಸಿದ ಮಾಹಿತಿ / ವಿವರಣೆಯು ನಾನು ತಿಳಿದಿರುವಷ್ಟರ ಮಟ್ಟಿಗೆ ಸತ್ಯವೆಂದು ಶ್ರದ್ಧಾಪೂರ್ವಕವಾಗಿ ದೃಢೀಕರಿಸುತ್ತೇನೆ ಮತ್ತು ಘೋಷಿಸುತ್ತೇನೆ.

ಸ್ಥಳ:
ದಿನಾಂಕ:

ತಮ್ಮ ವಿಧೇಯ
(ಅಭ್ಯರ್ಥಿಯ ಸಹಿ)

ಮೇಲೆ ಒದಗಿಸಲಾದ ಮಾಹಿತಿಗಳು ಸತ್ಯವಾಗಿರುತ್ತದೆ ಎಂದು ಪ್ರಮಾಣಿಕರಿಸುತ್ತಾ, ಈ ಮಾಹಿತಿಗಳು ಅಸತ್ಯವೆಂದು ದೃಢಪಟ್ಟಲ್ಲಿ ಅಪರಾಧ ವಿಚಾರಣೆಗೆ ಬದ್ಧನಾಗುರುತ್ತೇನೆ

ಸ್ಥಳ:
ದಿನಾಂಕ:

ತಂದೆ/ತಾಯಿ/ಪೋಷಕರ ಸಹಿ
(ತಂದೆ/ತಾಯಿ ಜೀವಂತವಿಲ್ಲದಿದ್ದರೆ)
(ಹೆಂಡತಿ/ಗಂಡ/ಇವರ ಸಹಿ)

ಸ್ಥಳೀಯ ಇಬ್ಬರು ಸಾಕ್ಷಿದಾರರು

ಅಭ್ಯರ್ಥಿಯ ಮತ್ತು ಅವರ ತಂದೆ/ತಾಯಿ/ಪೋಷಕರು/ಪತಿ/ಪತ್ನಿ ಇವರನ್ನು ಹಾಗೂ ಇವರ ಸಹಿಯನ್ನು ಗುರುತಿಸುತ್ತೇವೆ.

ಸಕ್ಷಿದಾರರ ಸಹಿ

1)

(ಪೂರ್ಣ ವಿಳಾಸದೊಂದಿಗೆ)

2)

ಪರಿಶೀಲನಾ ಪ್ರಮಾಣ ಪತ್ರ

1. ಶ್ರೀ/ಶ್ರೀಮತಿ ______________________ ಎಂಬುವವರ ಮಗ/ ಮಗಳು/ ಪತಿ/ ಪತ್ನಿ ಶ್ರೀ/ಶ್ರೀಮತಿ/ಕುಮಾರಿ ______________ ಎಂಬುವವರು ಕರ್ನಾಟಕ ರಾಜ್ಯದ __________ಜಿಲ್ಲೆಯ ವಿಭಾಗ ______________ ಗ್ರಾಮ/ಪಟ್ಟಣ/ನಗರದಲ್ಲಿ ಸಾಮಾನ್ಯ ನಿವಾಸಿಯಾಗಿದ್ದಾರೆ ಮತ್ತು ಇವರು ಜನರಲ್ ಮೆರಿಟ್ ವರ್ಗಕ್ಕೆ ಸೇರಿದವರಾಗಿರುತ್ತಾರೆ.

2. ಶ್ರೀ/ಶ್ರೀಮತಿ/ಕುಮಾರಿ ______________________ ಇವರ ತಂದೆ/ತಾಯಿ/ಪೋಷಕರು ಸರ್ಕಾರಿ ಆದೇಶ ಸಂಖ್ಯೆ: ಎಸ್‌ಡಬ್ಲ್ಯೂಡಿ 251 ಬಿಸಿಎ 94, ಬೆಂಗಳೂರು, ದಿನಾಂಕ: 31.01.1995 ರನ್ವಯ ಜನರಲ್ ಮೆರಿಟ್ ವರ್ಗದ ಮೇಲುಸ್ತರದಲ್ಲಿ (ಅಡಿಜಚಿಟಥಿ ಖಿಚಿಥಿಜಡಿ) ಬರುವುದಿಲ್ಲವೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ :
ದಿನಾಂಕ:

ತಹಶೀಲ್ದಾರ್
______________ತಾಲ್ಲೂಕು
ಕಛೇರಿಯ ಮೊಹರು

| | |
|---|---|
| ಸೂಚನೆ–1 : | ಇದರಲ್ಲಿ ಉಪಯೋಗಿಸಲಾದ 'ಸಾಮಾನ್ಯನಿವಾಸಿ' ಎಂಬಪದವು 1950ರ ಜನತಾಪ್ರಾತಿನಿಧ್ಯ ಕಾಯ್ದೆಯ 20ನೇ ಅನುಚ್ಛೇದದಲ್ಲಿನ ಅರ್ಥವನ್ನು ಹೊಂದಿರುತ್ತದೆ. |
| ಸೂಚನೆ–2: | ಪರಿಶೀಲನಾ ಪ್ರಮಾಣ ಪತ್ರ ನೀಡುವ ಅಧಿಕೃತ ಅಧಿಕಾರಿಯು ಸರ್ಕಾರಿ ಆದೇಶ ಸಂಖ್ಯೆ ಎಸ್‌ಡಬ್ಲ್ಯೂಡಿ 251 ಬಿಸಿಎ 94, ಬೆಂಗಳೂರು, ದಿನಾಂಕ: 31.01.1995 ರನ್ವಯ ಮೇಲುಸ್ತರ (ಅಡಿಜಚಿಟಥಿ ಖಿಚಿಥಿಜಡಿ) ದವರನ್ನು ಗುರುತಿಸಲು ನಿಗದಿಪಡಿಸಲಾಗಿರುವ ಅಂಶಗಳನ್ನು ವಿವರವಾಗಿ ಖಚಿತಪಡಿಸಿಕೊಂಡ ನಂತರವೇ ಪ್ರಮಾಣ ಪತ್ರ ನೀಡತಕ್ಕದ್ದು |

ನಮೂನೆ-2

ಗ್ರಾಮೀಣ ಅಭ್ಯರ್ಥಿ ಪ್ರಮಾಣ ಪತ್ರ

ಶ್ರೀ/ಶ್ರೀಮತಿ ________________________________________ ರವರ ಮಗ/ ಮಗಳು/ ಪತಿ/ ಪತ್ನಿ/ ಶ್ರೀ/ಶ್ರೀಮತಿ/ಕುಮಾರಿ____________________ ಜಿಲ್ಲೆ ______________ ತಾಲ್ಲೂಕು__________ ಗ್ರಾಮದಲ್ಲಿ ____________ ವಾಸವಾಗಿರುವ ಇವರು ಒಂದನೇ ತರಗತಿಯಿಂದ __________ ತರಗತಿಯವರೆಗೆ ____________ ಜಿಲ್ಲೆ ______________ ತಾಲ್ಲೂಕು________ ಪಟ್ಟಣ_______ ಶಾಲೆಯಲ್ಲಿ ವ್ಯಾಸಂಗ ಮಾಡಿ_____ವರ್ಷ ನಡೆದ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುತ್ತಾರೆ. ಈ ಶಾಲೆಯು ಅಭ್ಯರ್ಥಿಯು ವ್ಯಾಸಂಗ ಮಾಡಿದ ಅವಧಿಯಲ್ಲಿ ಕರ್ನಾಟಕ ಪೌರ ನಿಗಮಗಳ ಅಧಿನಿಯಮ, 1976 ಅಥವಾ ಕರ್ನಾಟಕ ಪೌರ ಸಭೆಗಳ ಅಧಿನಿಯಮ 1964ರ ಅಡಿಯಲ್ಲಿ ನಿರ್ದಿಷ್ಟಪಡಿಸಿ ಒಂದು ದೊಡ್ಡ ನಗರ ಪ್ರದೇಶ ಸಣ್ಣ ನಗರ ಪ್ರದೇಶ ಅಥವಾ ಪರಿವರ್ತನೆ ಹಂತದಲ್ಲಿರುವ ಪ್ರದೇಶಗಳ ಹೊರತಾದ ಪ್ರದೇಶದಲ್ಲಿತ್ತು.

ಮೇಲು ರುಜು
ಕ್ಷೇತ್ರ ಶಿಕ್ಷಣ ಅಧಿಕಾರಿ
ಕಛೇರಿಯ ಮೊಹರು

ಸಹಿ
ಮುಖ್ಯೋಪಾಧ್ಯಾಯರ ಸಹಿ
ಮತ್ತು ಸಂಸ್ಥೆಯ ಮೊಹರು

ಸ್ಥಳ :
ದಿನಾಂಕ:

---

ಕನ್ನಡ ಮಾಧ್ಯಮ ವ್ಯಾಸಂಗ ಪ್ರಮಾಣ ಪತ್ರ

ಶ್ರೀ/ಶ್ರೀಮತಿ_________________ರವರ ಮಗ/ಮಗಳು/ಪತಿ/ಪತ್ನಿ/ಶ್ರೀಮತಿ/ಕುಮಾರಿ_____________________ ಜಿಲ್ಲೆ __________________ತಾಲ್ಲೂಕು _______________ಗ್ರಾಮದಲ್ಲಿ ವಾಸವಾಗಿರುವ ಇವರು _______ನೇ ತರಗತಿಯಿಂದ ___________ನೇ ತರಗತಿಯವರೆಗೆ ___________ ಶೈಕ್ಷಣಿಕ ವರ್ಷದಿಂದ ________ ಶೈಕ್ಷಣಿಕ ವರ್ಷದವರೆಗೆ __________ಶಾಲೆಯಲ್ಲಿ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ:

ದಿನಾಂಕ:

ಮುಖ್ಯೋಪಾಧ್ಯಾಯರ ಸಹಿ ಮತ್ತು ಸಂಸ್ಥೆಯ ಮೊಹರು

---

## ರಾಜ್ಯ ಹಾಗೂ ಕೇಂದ್ರ ಸರ್ಕಾರಿ ನೌಕರರು ಸಲ್ಲಿಸಬೇಕಾದ ನಿರಾಕ್ಷೇಪಣ ಪ್ರಮಾಣ ಪತ್ರ

ಶ್ರೀ/ಶ್ರೀಮತಿ..............................................................ಆದ ಇವರು ರಾಜ್ಯ/ಕೇಂದ್ರ ಸರ್ಕಾರದಲ್ಲಿ ..........................................(ಪದನಾಮ)...........................................ಇಲಾಖೆಯಲ್ಲಿ ಖಾಯಂ/ತಾತ್ಕಾಲಿಕ ಹುದ್ದೆಯನ್ನು ದಿನಾಂಕ:............................ ರಿಂದ .................................ರವರೆಗೆ ಹೊಂದಿರುವರು. ಇವರು.................. ಹುದ್ದೆಗೆ ಅರ್ಜಿ ಸಲ್ಲಿಸಲು ಅನುಮತಿ ನೀಡಿದೆ.

ದಿನಾಂಕ:

ಸ್ಥಳ:

ನೇಮಕಾತಿ ಪ್ರಾಧಿಕಾರಿಯವರ ಸಹಿ ಮತ್ತು ಮೊಹರು

---

**GOVERNMENT OF KARNATAKA**
**DEPARTMENT OF SAINIK WELFARE AND RESETTLEMENT**
**Office of the Deputy Director Department of Sainik Welfare & Resettlement (Karnataka)**

**No.**

**Date:**

### CERTIFICATE

**This is to certify that Shri/Ssmt/Kum................................................is an applicant for ..............................in Karnataka is the spouse/son/daughter of No.....................Rank..........**

**Name ...................................................who died/was permanently disabled while in service according to the certificate issued by Defense Authority. He died/was permanently disabled on ....................**

**Home address of the individual at the time of joining Defense Service as per the records is:**

**.............................................................**

**................................................................**

**Place:**
**Date:**

**Signature of the Deputy Director**
**Department of Sainik Welfare & Resettlement**
**District ..................................**

ಅಂಗವಿಕಲ ಮೀಸಲಾತಿ ಪ್ರಮಾಣ ಪತ್ರ

ಕರ್ನಾಟಕ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ ಸಿಆಸುಇ 115 ಸೇಸೇನಿ 2005,
ದಿನಾಂಕ 19–11–2005

## CERTIFICATE FOR THE PERSONS WITH DISABILITIES

**This is to certify that Sri/Smt/Kum . . . . . . . . . . . . . . . . . . . . . . . . . . . . . . . . . . .**

**Son/Wife/Daughter of Shri . . . . . . . . . . . . . . . . . . . . . . . . . . . . . . . . . Age . . . . . . old,**

**male/female, Registration No. . . . . . . . . . . is a case of . . . . . . . . . . . . . . . . . . . . . . . . .**

**……. . . .**

**He/She is physically disabled visual disabled speech & hearing disabled and has . . . . & . . . . . . percent) permanent (Physical impairment visual impairment speech & hearing impairment) in relation to his/her . . .. . . . . . . .. . . .**

**Note:**

1. **This condition is progressive/non progressive likely to improve / not likely to improve.**
2. Re-assessment is not recommended / is recommended after a period of . . . . …… months/years.

*Strike out which is not applicable.

| | | | |
|---|---|---|---|
| **Recent Photograph Showing the disability affixed here.** | **(Sd/-) DOCTOR (Seal)** | **(Sd/-) DOCTOR (Seal)** | **(Sd/-) DOCTOR (Seal)** |

**Countersigned by the**
**Medical Superintendent CMO/Head of Hospital**
**(with seal)**

**Signature/Thumb impression**
**Of the disabled person.**

**Place:**
**Date:**